All India Radio: Bangalore
National Bulletin In Kannada
13.09.2026  1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.09.2026  1.10 p.m.
<><><><>

ಮುಖ್ಯಾಂಶಗಳು

1. ಸಣ್ಣ ಉದ್ಯಮಗಳ ಬಲವರ್ಧನೆಗಾಗಿ 'ಬ್ರಿಕ್ಸ್- ಎಮ್‌ಎಸ್‌ಎಮ್‌ಇ ಸಹಕಾರ ಪೋರ್ಟಲ್' ಸ್ಥಾಪನೆ- ಬ್ರಿಕ್ಸ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಘೋಷಣೆ
2. ಬ್ರಿಕ್ಸ್ ರಾಷ್ಟ್ರಗಳು ಅಂಗೀಕರಿಸಿದ 'ನವದೆಹಲಿ ಘೋಷಣೆ'ಗೆ ವಿಶ್ವ ಆರೋಗ್ಯ ಸಂಸ್ಥೆ ಶ್ಲಾಘನೆ
3. 'ದೆಹಲಿ ಘೋಷಣೆ'ಯೊಂದಿಗೆ ಮೂರು ದಿನಗಳ ಒಣಭೂಮಿ ಸಮಾವೇಶ ಸಂಪನ್ನ
4. ಮಹಿಳಾ ಟಿ-೨೦ ಏಷ್ಯಾಕಪ್ ಕ್ರಿಕೆಟ್: ಪ್ರಶಸ್ತಿಗಾಗಿ ಭಾರತ- ಶ್ರೀಲಂಕಾ ಹಣಾಹಣಿ
5. ಯುಎಸ್ ಓಪನ್ ಟೆನಿಸ್: ಪುರುಷರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿಂದು ಅಲೆಕ್ಸಾಂಡರ್ ಜ್ವೆರೆವ್ - ಬೆನ್ ಶೆಲ್ಟನ್ ಮುಖಾಮುಖಿ

<><><><>

ಇಂದಿನ ಪರಸ್ಪರ ಸಂಪರ್ಕ ಹೊಂದಿರುವ ಜಗತ್ತಿನಲ್ಲಿ ಯಾವುದೇ ಬಿಕ್ಕಟ್ಟು ಕೇವಲ ಒಂದು ಪ್ರದೇಶಕ್ಕೆ ಸೀಮಿತವಾಗಿರುವುದಿಲ್ಲ ಎಂಬುದನ್ನು ಸಾಂಕ್ರಾಮಿಕ ರೋಗಗಳು, ಹವಾಮಾನ ವೈಪರೀತ್ಯಗಳು ಮತ್ತು ಪೂರೈಕೆ ಸರಪಳಿಯ ಅಡಚಣೆಗಳು ಸಾಬೀತುಪಡಿಸಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ನವದೆಹಲಿಯ ಭಾರತ್ ಮಂಟಪದಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಈ ಕಾರಣದಿಂದಲೇ ಬ್ರಿಕ್ಸ್ ರಾಷ್ಟ್ರಗಳು ತಮ್ಮ ಒಕ್ಕೂಟದಲ್ಲಿ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸಲು ವಿಶೇಷ ಒತ್ತು ನೀಡಿವೆ ಎಂದು ತಿಳಿಸಿದರು. ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಯ ಕುರಿತಾದ ಅಧಿವೇಶನದಲ್ಲಿ, ಸವಾಲುಗಳನ್ನು ಸಮಯೋಚಿತವಾಗಿ ಗುರುತಿಸುವುದು, ಅವುಗಳಿಗೆ ಸಿದ್ಧತೆ ನಡೆಸುವುದು ಮತ್ತು ತಕ್ಷಣದ ಕ್ರಮ ಕೈಗೊಳ್ಳುವ ಅಗತ್ಯವನ್ನೂ ಅವರು ಪ್ರತಿಪಾದಿಸಿದರು. ಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ಅವುಗಳಿಗೆ ಪ್ರತಿಕ್ರಿಯಿಸಲು 'ಬ್ರಿಕ್ಸ್ ಸಮಗ್ರ ಮುನ್ನೆಚ್ಚರಿಕೆ ವ್ಯವಸ್ಥೆ'ಯ ಕುರಿತು ಒಮ್ಮತ ಮೂಡಿದೆ.

ವಿಪತ್ತು ನಿರ್ವಹಣೆಗಾಗಿ 'ಮುನ್ನೆಚ್ಚರಿಕೆ ದತ್ತಾಂಶ ಏಕೀಕರಣ ಮಾರ್ಗಸೂಚಿ'ಗಳನ್ನು ರೂಪಿಸಲಾಗಿದೆ ಎಂದು ಅವರು ತಿಳಿಸಿದರು. ತಂತ್ರಜ್ಞಾನ ಮತ್ತು ನಿರ್ಣಾಯಕ ಖನಿಜಗಳ ಶಸ್ತ್ರೀಕರಣವು ಪ್ರಗತಿಗೆ ಅಡ್ಡಿಯಾಗಬಹುದು ಎಂದು ಎಚ್ಚರಿಸಿದ ಅವರು, ತಂತ್ರಜ್ಞಾನ ಅಳವಡಿಕೆಯಲ್ಲಿ ಎಲ್ಲರನ್ನೂ ಒಳಗೊಳ್ಳುವಿಕೆಗೆ ಬ್ರಿಕ್ಸ್ ರಾಷ್ಟ್ರಗಳು ಒತ್ತು ನೀಡಿವೆ ಎಂದು ಹೇಳಿದರು. ಸಣ್ಣ ಉದ್ಯಮಗಳನ್ನು ಮಾಹಿತಿ, ಹಣಕಾಸು ಮತ್ತು ಹೊಸ ಮಾರುಕಟ್ಟೆಗಳೊಂದಿಗೆ ಸಂಪರ್ಕಿಸಲು 'ಬ್ರಿಕ್ಸ್-ಎಂಎಸ್ಎಂಇ ಸಹಕಾರ ಪೋರ್ಟಲ್' ಅನ್ನು ಸ್ಥಾಪಿಸುವ ಉಪಕ್ರಮವನ್ನು ಪ್ರಸ್ತಾಪಿಸಲಾಗಿದೆ ಎಂದು ಪ್ರಧಾನಿ ಮೋದಿ ತಿಳಿಸಿದರು. ನಗರಗಳ ನಡುವೆ ಉತ್ತಮ ಕಾರ್ಯವಿಧಾನಗಳ ವಿನಿಮಯವನ್ನು ಸುಗಮಗೊಳಿಸಲು 'ಬ್ರಿಕ್ಸ್ ನಗರ ಚಲನಶೀಲತೆ ಕೇಂದ್ರ'ವನ್ನು ಸ್ಥಾಪಿಸಲಾಗಿದೆ. ಸ್ಮಾರ್ಟ್ ಗ್ರಿಡ್‌ಗಳು ಮತ್ತು ಇಂಧನ ಸಂಗ್ರಹಣೆಗಾಗಿ 'ಬ್ರಿಕ್ಸ್ ಡಿಜಿಟಲ್ ಸೆಂಟರ್ ಆಫ್ ಎಕ್ಸಲೆನ್ಸ್' ಅನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು. ಇದು ಸ್ವಚ್ಛ ಇಂಧನ ವ್ಯವಸ್ಥೆಗಳನ್ನು ಹೆಚ್ಚು ವಿಶ್ವಾಸಾರ್ಹ, ಪರಿಣಾಮಕಾರಿ ಮತ್ತು ಸುಲಭವಾಗಿ ಲಭ್ಯವಾಗುವಂತೆ ಮಾಡಲು ಸಹಾಯ ಮಾಡುತ್ತದೆ. ಬ್ರಿಕ್ಸ್‌ನಲ್ಲಿ ಅಭಿವೃದ್ಧಿಪಡಿಸಲಾದ ಪರಿಹಾರಗಳ ಪ್ರಯೋಜನಗಳನ್ನು ಜಾಗತಿಕ ದಕ್ಷಿಣದ ರಾಷ್ಟ್ರಗಳು ಅಗತ್ಯಗಳಿಗೆ ಅನುಗುಣವಾಗಿ ಅಳವಡಿಸಿಕೊಳ್ಳುವ ಮತ್ತು ಲಭ್ಯವಾಗುವಂತೆ ಮಾಡುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು. 'ಬ್ರಿಕ್ಸ್ ಲಾಜಿಸ್ಟಿಕ್ ಪೂರೈಕೆ ಸರಪಳಿ ಸಹಕಾರ ' ಪೂರೈಕೆ ಸರಪಳಿಗಳನ್ನು ಹೆಚ್ಚು ವಿಶ್ವಾಸಾರ್ಹ ಮತ್ತು ಸ್ಥಿತಿಸ್ಥಾಪಕವಾಗಿಸಲು ಸಹಾಯ ಮಾಡುತ್ತದೆ. ನಾವೀನ್ಯತೆಯ ಅಡಿಯಲ್ಲಿ, 'ಬ್ರಿಕ್ಸ್ ಇನ್ಕ್ಯುಬೇಟರ್ ನೆಟ್‌ವರ್ಕ್' ಸ್ಟಾರ್ಟ್‌ಅಪ್‌ಗಳು ಮತ್ತು ಇನ್ಕ್ಯುಬೇಟರ್‌ಗಳನ್ನು ಸಂಪರ್ಕಿಸುತ್ತದೆ. ನವೀನ ಮತ್ತು ವಿಸ್ತರಿಸಬಹುದಾದ ಪರಿಹಾರಗಳನ್ನು ಉತ್ತೇಜಿಸಲು ಭಾರತ, 'ಬ್ರಿಕ್ಸ್ ಸ್ಟಾರ್ಟ್‌ಅಪ್ ಇನ್ನೋವೇಶನ್ ಫಂಡ್' ಅನ್ನು ಪ್ರಸ್ತಾಪಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದಕ್ಕೂ ಮುನ್ನ ನವದೆಹಲಿಯ ಭಾರತ್ ಮಂಟಪದಲ್ಲಿ ೧೮ ನೇ ಬ್ರಿಕ್ಸ್ ಶೃಂಗಸಭೆಯ ಎರಡನೇ ಮತ್ತು ಕೊನೆಯ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಕ್ಸ್ ಪಾಲುದಾರ ರಾಷ್ಟ್ರಗಳ ನಾಯಕರನ್ನು ಸ್ವಾಗತಿಸಿದರು.

ಅವರಲ್ಲಿ ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ, ವಿಯೆಟ್ನಾಂ ಪ್ರಧಾನಿ ಲೆ ಮಿನ್ ಹಂಗ್, ಸೌದಿ ಅರೇಬಿಯಾದ ವಿದೇಶಾಂಗ ಸಚಿವ ಫೈಸಲ್ ಬಿನ್ ಫರ್ಹಾನ್ ಮತ್ತು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಸೇರಿದ್ದಾರೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ: ಸಮಗ್ರ ಜಾಗತಿಕ ಬೆಳವಣಿಗೆಗೆ ಭವಿಷ್ಯವನ್ನು ರೂಪಿಸುವುದು' ಎಂಬ ವಿಷಯದ ಆಧಾರದ ಮೇಲೆ ನಡೆಯುತ್ತಿರುವ ಅಧಿವೇಶನದಲ್ಲಿ ಬ್ರಿಕ್ಸ್ ಪಾಲುದಾರ ರಾಷ್ಟ್ರಗಳ ನಾಯಕರು ಭಾಗವಹಿಸಿದ್ದಾರೆ. ಬೆಲಾರಸ್, ಬೊಲಿವಿಯಾ, ಕಝಾಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥೈಲ್ಯಾಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ- ಬ್ರಿಕ್ಸ್‌ನ ಪಾಲುದಾರ ರಾಷ್ಟ್ರಗಳಾಗಿವೆ. ಅಧಿವೇಶನದ ಮುಕ್ತಾಯದ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಕಝಾಕಿಸ್ತಾನ್ ಅಧ್ಯಕ್ಷ ಕಾಸಿಮ್-ಜೋಮಾರ್ಟ್ ಟೋಕಾಯೆವ್, ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಆರ್. ಮಾರ್ಕೋಸ್ ಜೂನಿಯರ್, ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ, ದಕ್ಷಿಣ ಆಫ್ರಿಕಾದ ಅಧ್ಯಕ್ಷ ಸಿರಿಲ್ ರಾಮಾಫೋಸಾ ಮತ್ತು ಬುರುಂಡಿ ಅಧ್ಯಕ್ಷ ಎವರಿಸ್ಟ್ ನಡೈಶಿಮಿಯೆ ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಅವರು ನೈಜೀರಿಯಾದ ಉಪಾಧ್ಯಕ್ಷ ಕಾಶಿಮ್ ಶೆಟ್ಟಿಮಾ ಮತ್ತು ಉಗಾಂಡಾದ ಉಪಾಧ್ಯಕ್ಷೆ ಜೆಸ್ಸಿಕಾ ಅಲುಪೊ ಅವರೊಂದಿಗೂ ಸಭೆ ನಡೆಸಲಿದ್ದಾರೆ. ಭಾರತದ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಈ ಶೃಂಗಸಭೆಯು 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ಧ್ಯೇಯವಾಕ್ಯದೊಂದಿಗೆ ನಡೆಯುತ್ತಿದೆ.

<><><><>

೨೦೨೬ ರ ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಬ್ರಿಕ್ಸ್ ರಾಷ್ಟ್ರಗಳು ಅಂಗೀಕರಿಸಿದ 'ನವದೆಹಲಿ ಘೋಷಣೆ'ಯನ್ನು ವಿಶ್ವ ಆರೋಗ್ಯ ಸಂಸ್ಥೆ ಶ್ಲಾಘಿಸಿದೆ. ಸಾಮಾಜಿಕ ಮಾಧ್ಯಮದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಮಹಾನಿರ್ದೇಶಕ ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್, ಸಾರ್ವತ್ರಿಕ ಆರೋಗ್ಯ ವ್ಯಾಪ್ತಿ, ಸ್ಥಿತಿಸ್ಥಾಪಕ ಆರೋಗ್ಯ ವ್ಯವಸ್ಥೆಗಳು, ರೋಗಕಾರಕ ಪ್ರವೇಶ ಮತ್ತು ಸಾಂಕ್ರಾಮಿಕ ಒಪ್ಪಂದಕ್ಕೆ ಪ್ರಯೋಜನ ಹಂಚಿಕೆ ಅನುಬಂಧದ ಕುರಿತು ಮಾತುಕತೆಗಳ ಯಶಸ್ವಿ ಮುಕ್ತಾಯಕ್ಕೆ ಬದ್ಧತೆಯನ್ನು ಶ್ಲಾಘಿಸಿದ್ದಾರೆ.

ಕ್ಷಯರೋಗವನ್ನು ಕೊನೆಗೊಳಿಸಲು, ಆರೋಗ್ಯ ಕಾರ್ಯಪಡೆಯನ್ನು ಬಲಪಡಿಸಲು, ಡಿಜಿಟಲ್ ಆರೋಗ್ಯವನ್ನು ಬಲಪಡಿಸಲು, ಸಾಂಪ್ರದಾಯಿಕ ಔಷಧವನ್ನು ಸಂಯೋಜಿಸಲು ಮತ್ತು ಎಲ್ಲರಿಗೂ ಆರೋಗ್ಯ ಎಂಬ ಧ್ಯೇಯದೊಂದಿಗೆ ಬ್ರಿಕ್ಸ್ ದೇಶಗಳ ಪ್ರಯತ್ನಗಳಿಗೆ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ನವದೆಹಲಿಯಲ್ಲಿ ಇರಾನ್‌ನ ಆರ್ಥಿಕ ವ್ಯವಹಾರಗಳು ಮತ್ತು ಹಣಕಾಸು ಸಚಿವ ಸೈಯದ್ ಅಲಿ ಮದನಿಜಾದೇಹ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಿದ್ದಕ್ಕಾಗಿ ಹಾಗೂ ಹಣಕಾಸು ವಿಭಾಗದ ಚರ್ಚೆಗಳಲ್ಲಿ ರಚನಾತ್ಮಕವಾಗಿ ತೊಡಗಿಸಿಕೊಂಡಿದ್ದಕ್ಕಾಗಿ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇರಾನ್‌ಗೆ ಧನ್ಯವಾದ ಸಲ್ಲಿಸಿದರು.

<><><><>

ನವದೆಹಲಿಯಲ್ಲಿ ನಡೆದ ಮೂರು ದಿನಗಳ ಒಣಭೂಮಿ ಸಮಾವೇಶ ೨೦೨೪ ಒಣಭೂಮಿ ಕೃಷಿಗೆ ಪರಿಹಾರಗಳನ್ನು ವೇಗಗೊಳಿಸಲು ಜಾಗತಿ ದಕ್ಷಿಣ ರಾಷ್ಟ್ರಗಳ ಸಹಕಾರಕ್ಕಾಗಿ ಕರೆ ನೀಡಲಾಯಿತು. 'ದೆಹಲಿ ಘೋಷಣೆ'ಯ ಅಂಗೀಕಾರದೊಂದಿಗೆ ಈ ಕಾರ್ಯಕ್ರಮವು ಸಂಪನ್ನವಾಯಿತು. ಜಾಗತಿಕ ದಕ್ಷಿಣದಾದ್ಯಂತ ಸಹಯೋಗ, ಜ್ಞಾನ ವಿನಿಮಯ, ನಾವೀನ್ಯತೆ ಮತ್ತು ಸಾಮೂಹಿಕ ಕ್ರಿಯೆಯ ಮೂಲಕ ಒಣಭೂಮಿ ಕೃಷಿಯನ್ನು ಪರಿವರ್ತಿಸಲು ಘೋಷಣೆಯು ಹಂಚಿಕೆಯ ಕಾರ್ಯಸೂಚಿಯನ್ನು ರೂಪಿಸಿತು. ವೈಜ್ಞಾನಿಕ ಜ್ಞಾನವನ್ನು ಕಾರ್ಯರೂಪಕ್ಕೆ ತರಲು, ಜಾಗತಿಕ ದಕ್ಷಿಣದಾದ್ಯಂತ ಸ್ಥಿತಿಸ್ಥಾಪಕ ಮತ್ತು ಸುಸ್ಥಿರ ಒಣಭೂಮಿ ಕೃಷಿಗಾಗಿ ಪಾಲುದಾರಿಕೆಗಳನ್ನು ಬಲಪಡಿಸಲು ಸಭೆಯು ನವೀಕೃತ ಬದ್ಧತೆಯನ್ನು ದೃಢಪಡಿಸಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಹೇಳಿದೆ.

<><><><>

ದುಬೈನಲ್ಲಿ ಇಂದು ನಡೆಯಲಿರುವ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ, ಭಾರತ ತಂಡ, ಹಾಲಿ ಚಾಂಪಿಯನ್ ಶ್ರೀಲಂಕಾ ತಂಡವನ್ನು ಎದುರಿಸಲಿದೆ.

ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಏಳು ಬಾರಿ ಚಾಂಪಿಯನ್ ಆಗಿರುವ ಭಾರತ ತಂಡ, 'ಎ' ಗುಂಪಿನಲ್ಲಿ ಮೂರು ಪಂದ್ಯಗಳ ಗೆಲುವುಗಳೊಂದಿಗೆ ಅಗ್ರಸ್ಥಾನ ಪಡೆದು ಹಾಗೂ ಸೆಮಿಫೈನಲ್‌ನಲ್ಲಿ ಬಾಂಗ್ಲಾದೇಶವನ್ನು ೪೦ ರನ್‌ಗಳಿಂದ ಸೋಲಿಸುವ ಮೂಲಕ ಅಜೇಯವಾಗಿ ಫೈನಲ್ ತಲುಪಿದೆ. ಶ್ರೀಲಂಕಾ ಕೂಡ ತಮ್ಮ ಗುಂಪಿನ ಮೂರೂ ಪಂದ್ಯಗಳನ್ನು ಗೆದ್ದು, ನಂತರ ಸೆಮಿಫೈನಲ್‌ನಲ್ಲಿ ಪಾಕಿಸ್ತಾನವನ್ನು ನಾಲ್ಕು ವಿಕೆಟ್‌ಗಳಿಂದ ಸೋಲಿಸುವ ಮೂಲಕ ಫೈನಲ್‌ನಲ್ಲಿ ಸ್ಥಾನ ಖಚಿತಪಡಿಸಿಕೊಂಡಿದೆ.

<><><><>

ಅಮೆರಿಕದ ನ್ಯೂಯಾರ್ಕ್‌ನ ಆರ್ಥರ್ ಆಶ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಯುಎಸ್ ಓಪನ್ ಟೆನಿಸ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಮತ್ತು ಅಮೆರಿಕದ ಬೆನ್ ಶೆಲ್ಟನ್ ಸೆಣಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೧:೩೦ಕ್ಕೆ ಆರಂಭವಾಗಲಿದೆ. ನ್ಯೂಯಾರ್ಕ್‌ನಲ್ಲಿ ನಿನ್ನೆ ರಾತ್ರಿ ನಡೆದ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಎಲೆನಾ ರಿಬಕಿನಾ ಅವರು ಅರಿನಾ ಸಬಲೆಂಕಾ ಅವರನ್ನು ಸೋಲಿಸಿ ಪ್ರಶಸ್ತಿ ವಿಜೇತರಾಗಿದ್ದಾರೆ. ಅವರು ಸಬಲೆಂಕಾ ಅವರನ್ನು ೬-೪, ೫-೭, ೬-೨ ಸೆಟ್‌ಗಳಿಂದ ಪರಾಭವಗೊಳಿಸಿದರು. ಇದು ಎಲೆನಾ ರಿಬಾಕಿನಾ ಅವರ ಮೊದಲ ಯುಎಸ್ ಓಪನ್ ಪ್ರಶಸ್ತಿಯಾಗಿದೆ. ಈ ವರ್ಷದ ಆರಂಭದಲ್ಲಿ ಆಸ್ಟ್ರೇಲಿಯನ್ ಓಪನ್ ಗೆದ್ದ ನಂತರ ಅವರ ವೃತ್ತಿಜೀವನದ ಮೂರನೇ ಗ್ರ್ಯಾಂಡ್ ಸ್ಲ್ಯಾಮ್ ಚಾಂಪಿಯನ್‌ಶಿಪ್ ಇದಾಗಿದೆ. ಈ ಗೆಲುವಿನೊಂದಿಗೆ, ರಿಬಕಿನಾ ವಿಶ್ವದ ನಂ.೧ ಶ್ರೇಯಾಂಕ ಪಡೆದಿದ್ದಾರೆ.

<><><><>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಇಂದು ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮೂರು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಪುರುಷರ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪ್ರಾರಂಭವಾಗಲಿದೆ. ಎರಡನೇ ಟಿ-೨೦ ಪಂದ್ಯ ಮಂಗಳವಾರ ನಡೆಯಲಿದ್ದು, ನಂತರ ಗುರುವಾರ ಮೂರನೇ ಹಾಗೂ ಅಂತಿಮ ಪಂದ್ಯ ನಡೆಯಲಿದೆ. ಈ ಮೂರೂ ಪಂದ್ಯಗಳು ಒಂದೇ ಸ್ಥಳದಲ್ಲಿ ಮತ್ತು ಒಂದೇ ಸಮಯದಲ್ಲಿ ನಡೆಯಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>